ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ; 400
2. ವಿಧಾನ ಪರಿಷತ್ತ ಸದಸ್ಯರು : ಶ್ರೀ ಅ. ದೇವೆಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸ ಬೇಕಾದ ದಿನಾಂಕ : 04.02.2021
4. ಉತ್ತರಿಸ ಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

ಕ್ರಸಂ	ಪ್ರಶ್ನೆಗಳು	ಉತ್ತರಗಳು
(ಅ)	ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಮತ್ತು ಶಿಕ್ಷಣ ಇಲಾಖೆಗಳ ಆದೇಶದಂತೆ ದಿನಾಂಕ:30.12.2015 ರೊಳಗೆ ಮರಣ/ನಿವೃತ್ತಿ /ವರ್ಗಾವಣೆ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆಯೇ;	ದಿನಾಂಕ:30.12.2015 ರೊಳಗೆ ಮರಣ/ನಿವೃತ್ತಿ /ವರ್ಗಾವಣೆ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಕಲ್ಪಿಸಿರುವ ಅವಕಾಶವನ್ನು ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10.06.2020 ರನ್ವಯ 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ.
(ಆ)	2020-21ನೇ ಸಾಲಿನಲ್ಲಿ ಆರ್ಥಿಕ ಇಲಾಖೆಯು ಕೋವಿಡ್-19ರ ಪರಿಣಾಮ ಸುತ್ತೋಲೆ ಹೊರಡಿಸಿ ವಿವಿಧ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಆಯ್ಕೆಯಾಗಿರುವ ಅಭ್ಯರ್ಥಿಗಳ ನೇಮಕಾತಿಯನ್ನು ತಡೆ ಹಿಡಿದಿರುವುದು ಸರಿಯೇ;	ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅನಿವಾರ್ಯವಾಗಿರುವುದರಿಂದ, ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ಹಾಗೂ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ ಎಲ್ಲಾ ಶಾಲಾ ಕಾಲೇಜುಗಳಲ್ಲಿನ ಎಲ್ಲಾ ಹಂತದ ನೇಮಕಾತಿಯನ್ನು ತಡೆಹಿಡಿಯಲಾಗಿರುತ್ತದೆ.
(ಇ)	ಆರ್ಥಿಕ ಇಲಾಖೆಯು ಹೊರಡಿಸಿರುವ ಸುತ್ತೋಲೆಯಿಂದ ಹಲವಾರು ವರ್ಷಗಳಿಂದ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವವರ ವಯೋಮಿತಿ ಮೀರುತ್ತಿದ್ದು, ಆರ್ಥಿಕ ಇಲಾಖೆಯು ಹೊರಡಿಸಿರುವ ಸುತ್ತೋಲೆಯನ್ನು ಸರ್ಕಾರವು ಹಿಂಪಡೆಯಲು ಸೂಕ್ತ ಕ್ರಮ ವಹಿಸುವುದೇ?	ರಾಜ್ಯದ ಆರ್ಥಿಕ ಸ್ಥಿತಿಯು ಸುಸ್ಥಿತಿಗೆ ಬಂದ ನಂತರ ಈ ಸಂಬಂಧ ಪರಿಶೀಲಿಸಲಾಗುವುದು.

ಸಂಖ್ಯೆ:ಆಇ 17 ವೆಚ್ಚ-8/2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ